## 1 ನೇ ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸಾಗರ

## ಸಿ.ಸಿ ಸಂಖ್ಯೆಃ 842-2022

**ಸಿ.ಡಬ್ಲ್ಯೂ -2, ಪಿ.ಡಬ್ಲ್ಯೂ -3**

| | | |
|---|---|---|
| ಸಾಕ್ಷಿದಾರರ ಹೆಸರು | : | ಚಿದಂಬರ |
| ತಂದೆಯ ಹೆಸರು | : | ಹುಚ್ಚೇಗೌಡ |
| ವಯಸ್ಸು | : | 63 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ | : | ಮಂಕಳಲೆ ಗ್ರಾಮ, ಸಾಗರ ತಾಲ್ಲೂಕು. |

**ಪ್ರಮಾಣೀಕರಿಸಿದ ದಿನಾಂಕ :12.06.2026.**

**ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕರಿಂದ**

1. ಈಗ ನಾನು ನೋಡುತ್ತಿರುವ ದಾಖಲೆಯ ಮೇಲಿನ ಸಹಿ ನನ್ನದೇ ಆಗಿರುತ್ತದೆ. 2-3 ವರ್ಷಗಳ ಹಿಂದೆ ಪೊಲೀಸರು ಮಂಕಳಲೆ ಗ್ರಾಮದ ಸರ್ವೇ ನಂಬರ್ 64 ರಲ್ಲಿ ಗಲಾಟೆಯಾಗಿದೆ ಎಂದು ನಮ್ಮನ್ನು ಕರೆದುಕೊಂಡು ಹೋಗಿ ಪೊಲೀಸರು ಸ್ಥಳವನ್ನು ನೋಡಿಕೊಂಡು ಬಂದರು. ಸಾಕ್ಷಿಯ ನಿಪಿ 2 ರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ 2(ಸಿ) ಎಂದು ಗುರುತಿಸಲಾಯಿತು. ಸಾಕ್ಷಿಯ ನಿಪಿ 7 ರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ 7(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ 3 ಮತ್ತು 4 ರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

(ಈ ಹಂತದಲ್ಲಿ ಸಾಕ್ಷಿಯು ಪಂಚನಾಮೆಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದಿದ್ದರಿಂದ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಕೋರಿಕೊಂಡಿರುತ್ತಾರೆ. ಕಡತಗಳನ್ನು ಪರಿಶೀಲಿಸಿ ಆಲಿಸಿ ಅನುಮತಿಯನ್ನು ನೀಡಲಾಯಿತು.)

ಪಾಟೀ ಸವಾಲುಃ- ಸ.ಸ.ಅ. ರವರಿಂದಃ-

1. ದಿಃ10.05.2022 ರಂದು ಪೊಲೀಸರು ಚಾಸ 1 ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾಸ 3 ರವರ ಸಮಕ್ಷಮ ಪಂಚನಾಮೆಯ ಕ್ರಮವನ್ನು ಜರುಗಿಸಿ ಪಂಚನಾಮೆಯ ಕಾಲಕ್ಕೆ ಫೋಟೋ ತೆಗೆದು, ಕಚ್ಚಾ ನಕಾಶೆಯನ್ನು ತಯಾರಿಸಿ ಪಂಚನಾಮೆಯನ್ನು ನಮಗೆ ಓದಿ ತಿಳಿಸಿದ ನಂತರ ತಿಳಿದುಕೊಂಡು ನಾನು ಸಹಿಯನ್ನು ಮಾಡಿರುತ್ತೇನೆ ಎಂದರೆ ಸರಿ.

<u>ಪಾಟೀ ಸವಾಲು:. ಆರೋಪಿತರ ಪರ ಶ್ರೀ ಆರ್.ಹೆಚ್.ಬಿ. ವಕೀಲರಿಂದ:.</u>

1. ನಾನು ಮತ್ತು ಚಾಸ 5 ಒಂದೇ ಜಾತಿಗೆ ಸೇರಿದವರಾಗಿರುತ್ತಾರೆ. ನನ್ನ ಹೆಂಡತಿಯ ಹೆಸರು ಲಕ್ಷ್ಮೀ. ಪೊಲೀಸರು ನನಗೆ ಪಂಚರಾಗಿ ಬರಬೇಕೆಂದು ಯಾವುದೇ ನೋಟೀಸನ್ನು ನೀಡಿರುವುದಿಲ್ಲ. ಚಾಸ 5 ಕೆಲಸ ಇದೆ ಬಾ ಎಂದು ಕರೆದ ಕಾರಣ ನಾನು ಸ್ಥಳಕ್ಕೆ ಹೋದೆ ಎಂದರೆ ಸರಿ. ಯಾವ ವಿಷಯಕ್ಕೆ ಯಾರು ಜಗಳವಾಡಿದರು ಎಂದು ನನಗೆ ಏನು ಗೊತ್ತಿಲ್ಲ ಎಂದರೆ ಸರಿ. ನಾನು ಪೊಲೀಸ್ ಠಾಣೆಗೆ ಹೋಗಿರುವುದಿಲ್ಲ. ಪೊಲೀಸರು ಏನು ಬರೆದುಕೊಂಡಿದ್ದಾರೆಂದು ನನಗೆ ಗೊತ್ತಿಲ್ಲ. ಪೊಲೀಸರ ಕೋರಿಕೆಯ ಮೇರೆಗೆ ದಾಖಲೆಗೆ ಸಹಿ ಮಾಡಿ ಫೋಟೋ ತೆಗೆಯುತ್ತೇವೆ ಎಂದು ಹೇಳಿದ ಕಾರಣ ನಿಂತುಕೊಂಡು ಫೋಟೋ ತೆಗೆಸಿಕೊಂಡಿರುತ್ತೇನೆ ಎಂದರೆ ಸರಿ. ಪೊಲೀಸರು ಸ್ಥಳಕ್ಕೆ ಯಾವ ಸಮಯಕ್ಕೆ ಬಂದರು ಏನು ಮಾಡಿದರು ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ಚಾಸ 5 ನನಗೆ ವಿಶ್ವಾಸದಲ್ಲಿದ್ದಾನೆ ಎಂದು ನಮ್ಮ ಊರಿನವನು ಎಂದು ಆತನಿಗೆ ಸಹಾಯವಾಗಲಿ ಎಂದು ಸಹಿ ಮಾಡಿರುತ್ತೇನೆ ಎಂದರೆ ಸರಿ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ ಎಂದರೆ ಸರಿ.

<u>ಮರು ವಿಚಾರಣೆ: ಇಲ್ಲ</u>

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)**

**ಓದಿ ಹೇಳಿ ಕೇಳಿ ಸರಿ ಇದೆ**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಾಗರ.